# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದೀಪಾಂಜಲಿನಗರ, ವಾರ್ಡ್ ಸಂಖ್ಯೆ-158, ಪಾಲಿಕೆ ಸದಸ್ಯರ ಕಛೇರಿ, 8ನೇ ಮುಖ್ಯರಸ್ತೆ, ಆವಲಹಳ್ಳಿ ಬಿಡಿಎ ಬಡಾವಣೆ,
(ಅಭಯ ಆಂಜನೇಯ ದೇವಸ್ಥಾನ ಹತ್ತಿರ) ಬೆಂಗಳೂರು-560 026

ಸಂಖ್ಯೆ: ಸ.ಕಾ.ನಿ.ಅ/ಗಾಳ/ಪಿಆರ್/ 806/A /2022-23 ದಿನಾಂಕ:-18-06-2022

ವಾರ್ಡ್ ಸಂಖ್ಯೆ : 158 ವಾರ್ಡ್ ಸಭೆಯ ನಡವಳಿ

**ಸಭೆಗೆ ಹಾಜರಾಗಿ ಭಾಗವಹಿಸಿದ ಸದಸ್ಯರು ಮತ್ತು ಸಾರ್ವಜನಿಕರ ವಿವರ:**

| ಕ್ರಮ ಸಂಖ್ಯೆ | ಅಧಿಕಾರಿಗಳು ಮತ್ತು ಸದಸ್ಯರುಗಳ ಹೆಸರು | ಪದನಾಮ/ಅಧ್ಯಕ್ಷರು | ಹಾಜರಾತಿ |
|---|---|---|---|
| 1 | ಶ್ರೀ. ಜಯಶಂಕರ್ | ನೊಡೇಲ್ ಅಧಿಕಾರಿ | ಹಾಜರಾಗಿರುತ್ತಾರೆ |
| 2 | ಶ್ರೀಮತಿ. ಚೈತ್ರ .ಜಿ.ಎಸ್. | ಕಾರ್ಯದರ್ಶಿ | ಹಾಜರಾಗಿರುತ್ತಾರೆ |
| 3 | ಶ್ರೀ. ಹೆಚ್. ಮಂಜುನಾಥ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಾಗಿರುತ್ತಾರೆ |
| 4 | ಶ್ರೀ. ಹೆಚ್.ಕೆ. ಕೃಷ್ಣಪ್ಪ | ಬಿ.ಡಬ್ಲ್ಯೂ.ಎಸ್.ಎಸ್.ಬಿ. (ಸ.ಅ) | ಹಾಜರಾಗಿರುತ್ತಾರೆ |
| 5 | ಶ್ರೀ. ಚಂದ್ರಶೇಖರ್.ಜಿ.ಆರ್. | ಬೆಸ್ಕಾಂ (ಕಿ.ಅ) | ಹಾಜರಾಗಿರುತ್ತಾರೆ |
| 6 | ಶ್ರೀಮತಿ. ಸುಮಿತ್ರ .ಕೆ.ಎಸ್. | ಬೆಸ್ಕಾಂ ಡಬ್ಲ್ಯೂ6 (ಕಿ.ಅ) | ಹಾಜರಾಗಿರುತ್ತಾರೆ |
| 7 | ಶ್ರೀ. ಅಭಿಲಾಶ್ .ಎನ್. | ಕಂದಾಯ ಇಲಾಖೆ | ಹಾಜರಾಗಿರುತ್ತಾರೆ |
| 8 | ಶ್ರೀ. ಕೆಂಪೇಗೌಡ .ಎಂ.ಬಿ. | ಬಿ.ಡಬ್ಲ್ಯೂ.ಎಸ್.ಎಸ್.ಬಿ. | ಹಾಜರಾಗಿರುತ್ತಾರೆ |
| 9 | ಶ್ರೀ. ಶಿವರಾಮಯ್ಯ | ಬೆಸ್ಕಾಂ (ಸ.ಅ) | ಹಾಜರಾಗಿರುತ್ತಾರೆ |

**ಸಭೆಗೆ ಹಾಜರಿದ್ದ ಸಾರ್ವಜನಿಕರು**

1. ಶ್ರೀ. ಕೃಷ್ಣ
2. ಶ್ರೀಮತಿ. ಗಿರಿಜಮ್ಮ
3. ಶ್ರೀ. ನಂಜುಂಡಯ್ಯ.ಎನ್.
4. ಶ್ರೀಮತಿ. ರಾಜೇಶ್ವರಿ
5. ಶ್ರೀ. ಮೋಹನ್

ಸಮಿತಿಯ ಕಾರ್ಯದರ್ಶಿಯವರು ಹಾಜರಿದ್ದ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಮತ್ತು ಸದಸ್ಯರುಗಳಿಗೆ ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ಸ್ವಾಗತ ಕೋರಿದ ನಂತರ ಸಭೆಯನ್ನು ಆರಂಭಿಸಲಾಯಿತು.

ಈ ಹಿಂದಿನ ಸಭೆಯಲ್ಲಿ ಬಂದಿದ್ದ ದೂರುಗಳ ಮೇಲೆ ಕೈಗೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸುತ್ತ ಪ್ರಸ್ತುತ ಕುಂದು ಕೊರತೆಗಳ ಬಗ್ಗೆ ಚರ್ಚೆ ಪ್ರಾರಂಭಿಸಲಾಯಿತು.

ವಿನೋಭ ಕಾಲೋನಿಯಲ್ಲಿ ಸೊಳ್ಳೆಗಳ ಸಂತತಿ ಹೆಚ್ಚಾಗಿದ್ದು ಔಷಧಿ ಸಿಂಪಡಿಸುವಂತೆ ಸದಸ್ಯರಾದ ಶ್ರೀಮತಿ.ಗಿರಿಜಮ್ಮ ರವರು ತಿಳಿಸಿದರು. ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮವನ್ನು ಕೈಗೊಳ್ಳಲು ತಿಳಿಸಲಾಗುವುದು ಎಂದು ನೋಡೆಲ್ ಅಧಿಕಾರಿ ರವರು ತಿಳಿಸಿದರು.

**ಕ್ರಮ : ಆರೋಗ್ಯ ಇಲಾಖೆ**

ವಿನೋಭ ಕಾಲೋನಿಯಲ್ಲಿ ಬೀದಿ ದೀಪ ಸಮಸ್ಯೆ ಇರುವುದಾಗಿ ಇದನ್ನು ಸರಿಪಡಿಸುವಂತೆ ಶ್ರೀಮತಿ.ಗಿರಿಜಮ್ಮ ರವರು ತಿಳಿಸಿದರು. ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮವನ್ನು ಕೈಗೊಳ್ಳಲು ತಿಳಿಸಲಾಗುವುದು ಎಂದು ನೋಡೆಲ್ ಅಧಿಕಾರಿ ರವರು ತಿಳಿಸಿದರು.

**ಕ್ರಮ : ಬೀದಿ ದೀಪಗಳ ಇಲಾಖೆ**

ರಂಗನಾಥ ಕಾಲೋನಿ ಪ್ರೈಡ್ ಅಪಾರ್ಟ್‌ಮೆಂಟ್ ರವರು ಎಸ್.ಟಿ.ಪಿ. ವಾಟರ್ ಅನ್ನು ರಂಗನಾಥ ಕಾಲೋನಿ ಕಡೆಗೆ ಬಿಡುವುದನ್ನು ತಪ್ಪಿಸುವಂತೆ ಮತ್ತು ಪ್ರೈಡ್ ಅಪಾರ್ಟ್‌ಮೆಂಟ್ ಹತ್ತಿರ ಸಂದಿ ರಸ್ತೆಯಲ್ಲಿ ಸಿ.ಸಿ.ಟಿ.ವಿ. ಅಳವಡಿಸುವಂತೆ ಸದಸ್ಯರಾದ ಶ್ರೀ. ಕೃಷ್ಣ ರವರು ತಿಳಿಸಿದರು, ಸದರಿ ವಿಷಯದ ಬಗ್ಗೆ ಕ್ರಮವನ್ನು ಕೈಗೊಳ್ಳಲು ಸಬಂಧಪಟ್ಟ ಅಧಿಕಾರಿಗಳಿಗೆ ನೋಡೆಲ್ ಅಧಿಕಾರಿ ರವರು ತಿಳಿಸಿದರು.

**ಕ್ರಮ : ಕಾಮಗಾರಿ ಇಲಾಖೆ**

ವಿನೋಭ ಕಾಲೋನಿ 4ನೇ ಅಡ್ಡರಸ್ತೆ ಮತ್ತು 3ನೇ ಅಡ್ಡರಸ್ತೆಯಲ್ಲಿ ಸರಿಯಾದ ಪ್ರಮಾಣದಲ್ಲಿ ನೀರು ಬಿಡುತ್ತಿಲ್ಲ ಮತ್ತು ಆವಲಹಳ್ಳಿ ವಿನೋಭ ಕಾಲೋನಿ 2ನೇ,3ನೇ,4ನೇ ಮತ್ತು 5ನೇ ಅಡ್ಡರಸ್ತೆಗಳಲ್ಲಿ ಚರಂಡಿ ಬ್ಲಾಕ್ ಆಗಿದ್ದು ಮಣ್ಣನ್ನು ತೆರವುಗೊಳಿಸುವಂತೆ ಸದಸ್ಯರಾದ ಶ್ರೀ. ನಂಜುಂಡಯ್ಯ ರವರು ತಿಳಿಸಿದರು. ಸಭೆಯಲ್ಲಿ ಹಾಜರಾಗಿದ್ದು ಸಂಬಂಧಪಟ್ಟ ಅಧಿಕಾರಿಗಳಿಗೆ ಕೂಡಲೇ ಕ್ರಮವನ್ನು ಕೈಗೊಳ್ಳಲು ನೋಡೆಲ್ ಅಧಿಕಾರಿ ರವರು ತಿಳಿಸಿದರು.

**ಕ್ರಮ : ಬಿ.ಡಬ್ಲ್ಯೂ.ಎಸ್.ಎಸ್.ಬಿ. ಇಲಾಖೆ**

ಮೈಸೂರು ರಸ್ತೆಯ ಟಯೋಟ ಷೋರೂಂ ಹತ್ತಿರ ರಸ್ತೆಯಲ್ಲಿ ಬಾರಿ ವಾಹನಗಳು ಸಂಚರಿಸುತ್ತಿದ್ದು, ಅವುಗಳನ್ನು ನಿರ್ಬಂಧಿಸಬೇಕೆಂದು ಹಾಗೂ ನಾಮ ಫಲಕವನ್ನು ಹಾಕುವಂತೆ ಶ್ರೀ. ಕೃಷ್ಣ ರವರು ತಿಳಿಸಿ. ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮವನ್ನು ಕೈಗೊಳ್ಳಲು ತಿಳಿಸಲಾಗುವುದು ಎಂದು ನೋಡೆಲ್ ಅಧಿಕಾರಿ ರವರು ತಿಳಿಸಿದರು.

**ಕ್ರಮ : ಪೊಲೀಸ್ ಇಲಾಖೆ**

F5

ಸಭೆಯನ್ನು ಕಾರ್ಯದರ್ಶಿಗಳಾದ ಶ್ರೀಮತಿ. ಚೈತ್ರ .ಜಿ.ಎಸ್. ರವರು ವಂದನಾರ್ಪಣೆಯೊಂದಿಗೆ ಮುಕ್ತಾಯ ಮಾಡಿದರು.

ಕಾರ್ಯದರ್ಶಿ
ವಾರ್ಡ್ ಸಂಖ್ಯೆ : 158 (ದೀಪಾಂಜಲಿನಗರ)

<u>ಪ್ರತಿಯನ್ನು</u>:-

1. ಮಾನ್ಯ ಆಯುಕ್ತರ ಆಪ್ತ ಸಹಾಯಕರಿಗೆ ಕಳುಹಿಸುತ್ತಾ ಮಾನ್ಯ ಆಯುಕ್ತರ ಗಮನಕ್ಕೆ ತರುವಂತೆ ಕೋರಿದೆ.
2. ವಿಶೇಷ ಆಯುಕ್ತರು ಆಡಳಿತ ರವರ ಅವಗಾಹನೆಗೆ ಸಲ್ಲಿಸಿದೆ.
3. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
4. ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳು ರವರ ಅವಗಾಹನೆಗೆ ಸಲ್ಲಿಸಿದೆ.